ವಿಷಯ:–ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ನಾಗರಿಕರಿಗೆ ಹಾಗೂ ಸಂಸ್ಥೆಗೆ ಪ್ರಶಸ್ತಿ ನೀಡಲು ರಚಿಸಿರುವ ಆಯ್ಕೆ ಸಮಿತಿಯ ಪುನರ್ ರಚನೆ ಬಗ್ಗೆ – ಆದೇಶ.

ಓದಲಾಗಿದೆ:– 1)ಸರ್ಕಾರಿ ಆದೇಶ ಸಂಖ್ಯೆ: ಮಮಇ 201 ಪಿಹೆಚ್‌ಪಿ 2010 ದಿನಾಂಕ:05.10.2010.

2)ವಿಹಿನಾಸಇ:ಹಿನಾನಿ:ಸಿ–1:ಹಿ.ನಾ.ರಾಜ್ಯಪ್ರಶಸ್ತಿ:16:2013–14 /1099, 4573 ದಿನಾಂಕ:06.07.2013 / 19.08.2012.

ಪ್ರಸ್ತಾವನೆ:–

ಮೇಲೆ ಓದಲಾದ ಉಲ್ಲೇಖ 1 ರಲ್ಲಿ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿ 2003 ರಿಂದ ಹಿರಿಯ ನಾಗರಿಕರ ನೀತಿ ಜಾರಿಗೊಳಿಸಿರುವುದರಿಂದ ಪ್ರತಿ ವರ್ಷ 1ನೇ ಅಕ್ಟೋಬರ್ ರಂದು ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ವಿಶ್ವ ಹಿರಿಯ ನಾಗಿರಿಕರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುತ್ತಿದ್ದು, ಆ ಸಂದರ್ಭದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಗೈದ ಸಂಸ್ಥೆ ಹಾಗೂ ವ್ಯಕ್ತಿಗಳನ್ನು ಗುರುತಿಸಿ ಸನ್ಮಾನಿಸುತ್ತಿರುವುದರಿಂದ, ಪ್ರಶಸ್ತಿ ಪತ್ರ, ಫಲಕ, ಶಾಲು, ಹಣ್ಣು ಹಂಪಲು ಬುಟ್ಟಿ ಇವುಗಳನ್ನು ನೀಡಿ ಗೌರವಿಸುತ್ತಿದ್ದು, ಯಾವುದೇ ನಗದು ಪುರಸ್ಕಾರ ನೀಡಲು ಅವಕಾಶ ಇಲ್ಲದಿದ್ದರೂ, ಸರ್ಕಾರವು ಹಿರಿಯ ನಾಗರಿಕರಿಗೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು ಮತ್ತು ಕ್ರೀಡೆಗೆ ಸೇರಿದಂತೆ 5 ಪ್ರಶಸ್ತಿಗಳನ್ನು, ವ್ಯಕ್ತಿ ಹಾಗೂ ಸಂಸ್ಥೆಗೆ ತಲಾ 1 ಪ್ರಶಸ್ತಿಯಂತೆ ಒಟ್ಟು 7 ಪ್ರಶಸ್ತಿಗಳೊಂದಿಗೆ ಪ್ರತಿ ಪ್ರಶಸ್ತಿಗೆ ರೂ.10,000 ದಂತೆ ನಗದು ಬಹುಮಾನವನ್ನು ನೀಡಲು ತೀರ್ಮಾನಿಸಿದೆ. ರಾಜ್ಯ ಮಟ್ಟದಲ್ಲಿ ಪ್ರತಿ ವರ್ಷ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಂತಹ ಹಿರಿಯ ನಾಗರಿಕರನ್ನು ಹಾಗೂ ಸಂಸ್ಥೆಯನ್ನು ಆಯ್ಕೆ ಮಾಡಲು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಉಲ್ಲೇಖ (2)ರ ನಿರ್ದೇಶಕರು, ವಿ.ಹಾ.ಹಿ.ನಾ.ಸ. ಇಲಾಖೆ ಇವರು ತಮ್ಮ ಪ್ರಸ್ತಾವನೆಗಳಲ್ಲಿ ಪ್ರತಿ ವರ್ಷ ಅಕ್ಟೋಬರ್ 01 ರಂದು ನಡೆಯಲಿರುವ ವಿಶ್ವ ಹಿರಿಯ ನಾಗರಕರ ದಿನಾಚರಣೆಯನ್ನು ರಾಜ್ಯಮಟ್ಟದಲ್ಲಿ ಆಚರಿಸುತ್ತಿದ್ದು, ಆ ಸಂದರ್ಭದಲ್ಲಿ ಅತ್ಯುತ್ತಮ ಸೇವೆ/ಸಾಧನೆ ಮಾಡಿದಂತಹವರನ್ನು ಗುರುತಿಸಿ ಸನ್ಮಾನ ಮಾಡುವುದು ಪ್ರತೀತಿ ಇದೆ. ಅದೇ ರೀತಿ 2013–14ನೇ ಸಾಲಿನಲ್ಲಿ ಅಕ್ಟೋಬರ್ 01 ರಂದು ನಡೆಯಲಿರುವ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಸಂದರ್ಭದಲ್ಲಿ ಗಣ್ಯ ವ್ಯಕ್ತಿಗಳನ್ನು ಗುರುತಿಸಿ ಆಯ್ಕೆ ಮಾಡುವುದು ಮತ್ತು ಪ್ರಶಸ್ತಿಗಾಗಿ ಸಂಸ್ಥೆಗಳನ್ನು ಆಯ್ಕೆಗೊಳಿಸಬೇಕಾಗಿದೆ ಈ ರೀತಿ ಆಯ್ಕೆಗೊಳಿಸಲು ಸರ್ಕಾರಿ ಆದೇಶ ಸಂಖ್ಯೆ :ಮಮ ಇ 201 ಪಿಹೆಚ್ ಪಿ 2010 ದಿನಾಂಕ:05.10.2010ರ ಆದೇಶದಲ್ಲಿ ರಚಿಸಲ್ಪಟ್ಟಿರುವ ಆಯ್ಕೆ ಸಮಿತಿಯು ನಿರ್ಧರಿಸಬೇಕಾಗುತ್ತದೆಂದು ಹಾಗೂ ದಿನಾಂಕ:5.10.2010ರಂದು ಹೊರಡಿಸಿದ ಆಯ್ಕೆ ಸಮಿತಿ ರಚನೆ ಆದೇಶದಲ್ಲಿ ಒಳಗೊಂಡಿರುವ ಸದಸ್ಯರುಗಳ ಪೈಕಿ ಸರ್ಕಾರದ ಉಪ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸುವಂತೆ ಕೋರಿ 2013–14ನೇ ಸಾಲಿನಲ್ಲಿ ರಾಜ್ಯ ಪ್ರಶಸ್ತಿಗಳನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಸರ್ಕಾರೇತರ ಸದಸ್ಯರನ್ನು ಆಯ್ಕೆಗೊಳಿಸಲು ವ್ಯಕ್ತಿ ಹಾಗೂ ಸಂಸ್ಥೆಯ

52
28.9.2013

ಪ್ರತಿನಿಧಿಗಳ ವಿವರಗಳನ್ನು ಈ ಕೆಳಗಿನಂತೆ ಸಲ್ಲಿಸಿ ಸಮಿತಿ ಸದಸ್ಯರ ನೇಮ. ಆದೇಶವನ್ನು ರಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

| ಕ್ರ.ಸಂ. | ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಹಿರಿಯ ನಾಗರಿಕರ ವಿವರ | ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಯ ಪ್ರತಿನಿಧಿಯ ವಿವರ |
|---|---|---|
| 1. | ಶ್ರೀ. ರೇಣು, ಸಿ.ಬಿ.ಆರ್. ನೆಟ್‌ವರ್ಕ್. | ಜಿ.ಎಲ್.ಎಸ್ ಮೂರ್ತಿ, ಅಶಕ್ತ ಪೋಷಕರ ಸಭಾ. |
| 2. | ಶ್ರೀ ಸಂಪತ್, ನಿವೃತ್ತ ನೌಕರರ ಅಧ್ಯಕ್ಷರು. | ಶ್ರೀ. ಅರುಣ್, ಶತಶೃಂಗ ವೃದ್ಧಾಶ್ರಮ |
| 3. | ಎನ್ ಮೂರ್ತಿರಾವ್, ಫೆಡರೇಷನ್ ಆಫ್ ಸೀನಿಯರ್ ಸಿಟಿಜನ್ ಫೋರಮ್ | ಶ್ರೀಮತಿ ರಾಧಾಮೂರ್ತಿ, ನೈಟಿಂಗೇಲ್ ಮೆಡಿಕಲ್ ಟ್ರಸ್ಟ್ |

ಮೇಲೆ ಪ್ರಸ್ತಾವನೆಯನ್ನು ಕೂಲಂಕೂಷವಾಗಿ ಪರಿಶೀಲಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ:ಮಮಇ 201 ಪಿಹೆಚ್‌ಪಿ 2010 ದಿನಾಂಕ:05.10.2010 ರ ಆದೇಶದಲ್ಲಿ ರಚಿಸಿರುವ ಆಯ್ಕೆ ಸಮಿತಿ ಸಭೆಯಲ್ಲಿ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ 1 ಸಂಸ್ಥೆಗೆ ಪ್ರಶಸ್ತಿ ನೀಡಲು ಅವಕಾಶವಿರುವುದರಿಂದ, ಹಾಲಿ ಜಾರಿಯಲ್ಲಿರುವ ದಿನಾಂಕ:05.10.2010ರ ಸಮಿತಿಯನ್ನು, ಈ ಕೆಳಕಂಡ ಪ್ರತಿನಿಧಿಯನ್ನು ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ.ಸಂಪತ್, ನಿವೃತ್ತ ನೌಕರರ ಸಂಘದ ಅಧ್ಯಕ್ಷರು ಇವರನ್ನು ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಹಿರಿಯ ನಾಗರಿಕರಲ್ಲೊಬ್ಬರಾದ ಶ್ರೀಮತಿ ರಾಧಾ ಮೂರ್ತಿ ನೈಟಿಂಗೇಲ್ ಮೆಡಿಕಲ್ ಟ್ರಸ್ಟ್ ರವರನ್ನು ಸದಸ್ಯರನ್ನಾಗಿ ಮತ್ತು ಸಂಸ್ಥೆಯ ಪ್ರತಿನಿಧಿಯಾಗಿ ಆಯ್ಕೆ ಮಾಡಲು ಸರ್ಕಾರವು ನಿರ್ಧರಿಸಿ ದಿ:5.10.2010ರ ಆಯ್ಕೆ ಸಮಿತಿಯನ್ನು ಈ ಕೆಳಗಿನಂತೆ ಪುನರ್‌ರಚನೆಗೊಳಿಸಿ ಆದೇಶ ಹೊರಡಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 304 ಪಿಹೆಚ್‌ಪಿ 2013, ಬೆಂಗಳೂರು
## ದಿನಾಂಕ:19.09.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, 1ನೇ ಅಕ್ಟೋಬರ್‌ರಂದು ಪ್ರತಿ ವರ್ಷ ಹಿರಿಯ ನಾಗರಿಕರ ದಿನಾಚರಣೆ ಆಚರಿಸುವ ಸಂದರ್ಭದಲ್ಲಿ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ / ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಸಲ್ಲಿಸಿರುವುದು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಒಂದು ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 7 ಪ್ರಶಸ್ತಿಗಳನ್ನು ಆಯ್ಕೆ ಮಾಡಲು ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು — ಅಧ್ಯಕ್ಷರು

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ — ಸದಸ್ಯರು

3. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ — ಸದಸ್ಯರು

4. ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಒಬ್ಬ
ಹಿರಿಯ ನಾಗರಿಕರು
(ಶ್ರೀ. ಸಂಪತ್, ನಿವೃತ್ತ ನೌಕರರ ಸಂಘದ
ಅಧ್ಯಕರು) — ಸದಸ್ಯರು

5. ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ
ಸಂಸ್ಥೆಯ ಪ್ರತಿನಿಧಿ
(ಶ್ರೀಮತಿ ರಾಧಮೂರ್ತಿ, ನೈಟಿಂಗೇಲ್,
ಮೆಡಿಕಲ್ ಟ್ರಸ್ಟ್) — ಸದಸ್ಯರು

6. ಜಂಟಿ ಕಾರ್ಯದರ್ಶಿ / ಉಪ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ — ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

[ಬಿ.ಕಮಲಮ್ಮ]
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು(ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ ಬೆಂಗಳೂರು.
2. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಉಪನಿರ್ದೇಶಕರು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.
4. ಎಲ್ಲಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
5. ಮಾನ್ಯ ಇಲಾಖಾ ಸಚಿವರ ಆಪ್ತಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
6. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ.